## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **397 (539)** |
| ಸದಸ್ಯರ ಹೆಸರು | : | ಶ್ರೀ ಡಾ : ವೈ.ಎ. ನಾರಾಯಣಸ್ವಾಮಿ ( ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19.02.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ. ಸಂ | ಪ್ರಶ್ನೆ | ವಿವರ |
|---|---|---|
| ಅ) | ದಿನಾಂಕ:01.08.2008ರ ನಂತರ ನೇಮಕವಾದ ಪ್ರೌಢ ಶಾಲಾ ಶಿಕ್ಷಕರ, ಮುಖ್ಯ ಗುರುಗಳು, ಅನುದಾನಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರುಗಳಿಗೆ ವಾರ್ಷಿಕ ವೇತನವನ್ನು ಮೂಲ ವೇತನದಲ್ಲಿ ಸೇರಿಸುವಲ್ಲಿ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ದಿನಾಂಕ:01/08/2008ರ ನಂತರ ನೇಮಕವಾದ ಯಾವುದೇ ಶಿಕ್ಷಕರುಗಳಿಗೆ ವಾರ್ಷಿಕ ವೇತನ ಬಡ್ತಿಯನ್ನು ಮೂಲ ವೇತನದಲ್ಲಿ ಸೇರಿಸಿರುವುದಿಲ್ಲ |
| ಆ) | ಹಾಗಿದ್ದಲ್ಲಿ, ಯಾವ ಕಾಲಮಿತಿಯ ಒಳಗೆ ಈ ಸೌಲಭ್ಯ ಒದಗಿಸಲಾಗುವುದು ಹಾಗೂ ಮರು ಪಾವತಿಸಿಕೊಳ್ಳುವ ಆದೇಶವನ್ನು ವಾಪಸ್ಸು ಪಡೆಯಲಾಗುವುದು; (ಸಂಪೂರ್ಣ ವಿವರ ನೀಡುವುದು) | ಯಾವುದೇ ಶಿಕ್ಷಕರುಗಳಿಗೆ ವಾರ್ಷಿಕ ವೇತನ ಬಡ್ತಿಯನ್ನು ಮೂಲ ವೇತನದಲ್ಲಿ ಸೇರಿಸದೆ ಇರುವುದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ |
| ಇ) | ದಿನಾಂಕ:01.08.2008ರ ಪೂರ್ವದಲ್ಲಿ ನೇಮಕವಾದ ಪ್ರೌಢ ಶಾಲಾ ಶಿಕ್ಷಕರು, ಮುಖ್ಯ ಗುರುಗಳಿಗೆ ಈ ಇನ್‌ಕ್ರಿಮೆಂಟ್ ನೀಡಲು ಕಾರಣವೇನು ಹಾಗೂ ದಿನಾಂಕ:01.08.2008ರ ನಂತರ ನೇಮಕವಾದ ಪ್ರೌಢ ಶಾಲಾ ಶಿಕ್ಷಕರು, ಮುಖ್ಯ ಗುರುಗಳಿಗೂ ಈ ಇನ್‌ಕ್ರಿಮೆಂಟ್‌ನ್ನು ನೀಡಲು ನಿರಾಕರಿಸಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು) | ದಿನಾಂಕ:01/08/2008ರ ಪೂರ್ವದಲ್ಲಿ ಹಾಗೂ ನಂತರದಲ್ಲಿ ನೇಮಕಗೊಂಡ ಶಿಕ್ಷಕರುಗಳಿಗೆ ವಾರ್ಷಿಕ ವೇತನ ಬಡ್ತಿಯನ್ನು ನೀಡಿರುವುದಿಲ್ಲ. |
| ಈ) | ದಿನಾಂಕ:01.08.2008ರ ನಂತರ ನೇಮಕವಾದ ಪ್ರೌಢ ಶಾಲಾ ಶಿಕ್ಷಕರು, ಮುಖ್ಯ ಗುರುಗಳು, ಅನುದಾನಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರುಗಳಿಗೆ ವಾರ್ಷಿಕ ವೇತನ ನೀಡುವಂತೆ ನ್ಯಾಯಾಲಯದಲ್ಲಿ ದಾವೆ ಹೂಡಿರುವ ಪ್ರಕರಣಗಳು ಇದ್ದಲ್ಲಿ ಆ ಪ್ರಕರಣಕ್ಕೆ ನ್ಯಾಯಾಲಯವು ತೀರ್ಪು ನೀಡಿದ್ದು, ತೀರ್ಪಿನ ಅನ್ವಯ ಕ್ರಮವಹಿಸುವ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಖಾಸಗಿ ಅನುದಾನಿತ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ ದಿನಾಂಕ:01/08/2008ರ ನಂತರ ನೇಮಕಗೊಂಡ ಅನುದಾನಿತ ಶಿಕ್ಷಕರುಗಳಿಗೆ ವಾರ್ಷಿಕ ವೇತನ ಬಡ್ತಿಯನ್ನು ನೀಡುವಂತೆ ನ್ಯಾಯಾಲಯದಲ್ಲಿ ದಾವೆ ಹೂಡಿರುವ ಬಗ್ಗೆ ಹಾಗೂ ತೀರ್ಪು ನೀಡಿದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. |

ಸಂಖ್ಯೆ:ಇಪಿ 36 ಎಸ್‌ಎಲ್‌ಬಿ 2024

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು